ಕರ್ನಾಟಕ ಸರ್ಕಾರ

(ಕಂದಾಯ ಇಲಾಖೆ)

ಉಪತಹಶೀಲ್ದಾರವರ ನ್ಯಾಯಾಲಯ ನಾಡಕಚೇರಿ ಕೊಟ್ಟೂರು

ಸಂ/ಕಂ/ಹ.ಬ./ನಾಕಕೊ/86/2015-16. ದಿನಾಂಕ:26-09-2016.

| ವಾದಿಗಳು | ಪ್ರತಿವಾದಿಗಳು |
|---|---|
| 1)ಹಡಪದ ಸಿದ್ದಮ್ಮ ತಂದೆ ಕೆ.ಗೂಳೆಪ್ಪ<br>2)ಫಕ್ಕೀರಪ್ಪ ತಂದೆ ಲೇಟ್ ಭರಮಪ್ಪ<br>ಉಜ್ಜನಿ ಗ್ರಾಮ<br>ಕೂಡ್ಲಿಗಿ ತಾಲೂಕು | ದ್ಯಾಮಪ್ಪ ತಂದೆ ಕಲ್ಲಪ್ಪ<br>ಉಜ್ಜನಿ ಗ್ರಾಮ<br>ಕೂಡ್ಲಿಗಿ ತಾಲೂಕು |
| ಕೂಡ್ಲಿಗಿ ತಾಲೂಕು ಉಜ್ಜನಿ ಗ್ರಾಮದ ಸನಂ 768ಬಿ. ವಿಸ್ತೀರ್ಣ 2-78. ಎಕ್ರೆ ಜಮೀನನ್ನು ಕ್ರಯ ಪತ್ರ ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಉಜ್ಜನಿ ಗ್ರಾಮದ ಸನಂ 768ಬಿ. ವಿಸ್ತೀರ್ಣ 2-78. ಎಕ್ರೆ ಜಮೀನನ್ನು ಸದರಿ ಗ್ರಾಮದ ಹಡಪದ ಸಿದ್ದಮ್ಮ ತಂದೆ ಕೆ.ಗೂಳೆಪ್ಪ ಇವರಿಂದ ಸದರಿ ಗ್ರಾಮದ ಫಕ್ಕೀರಪ್ಪ ತಂದೆ ಲೇಟ್ ಮಡಿವಾಳರ ಭರಮಪ್ಪ ಇವರು ದಿನಾಂಕ 07-08-2015 ರ ಡಾಕ್ಯುಮೆಂಟ್ ನಂಬರ್: 1439/2015-16. ರ ಪ್ರಕಾರ ಖರೀದಿಸಿ ಕೂಡ್ಲಿಗಿಯ ಉಪನೊಂದಣಾಧಿಕಾರಿಗಳ ಕಛೇರಿಯಲ್ಲಿ ನೊಂದಣಿ ಮಾಡಿಸಿ ಕೊಂಡಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಉಜ್ಜನಿ ಇವರು ನಮೂನೆ-21 ನೋಟಿಸನ್ನು ದಿನಾಂಕ 15-08-2015 ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಸದರಿ ಗ್ರಾಮದ ದ್ಯಾಮಪ್ಪ ತಂದೆ ಕಲ್ಲಪ್ಪ ಇವರು ತಕರಾರು ಅರ್ಜಿ ಸಲ್ಲಿಸಿರುವ ಕಾರಣ ಈ ಪ್ರಕರಣದ ಎಂ.ಆರ್.ನಂಬರ್: 16/2015-16. ದಿನಾಂಕ 16-09-2015 ರಲ್ಲಿ ವಿವಾದಾಸ್ಪದ ಪ್ರಕರಣವೆಂದು ಪರಿಗಣಿಸಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸ್ಸು ನೀಡಿ ದಿನಾಂಕ 19-01-2016. ರಿಂದ 26-09-2016 ರ ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಹಾಜರಾಗಿರುತ್ತಾರೆ. ತಕರಾರುದಾರರು ಗೈರು ಹಾಜರಾಗಿರುತ್ತಾರೆ. ಅರ್ಜಿದಾರರು ಉಜ್ಜನಿ ಗ್ರಾಮದ ಸನಂ 768ಬಿ. ವಿಸ್ತೀರ್ಣ 2-78. ಎಕ್ರೆ ಜಮೀನನ್ನು ಸದರಿ ಗ್ರಾಮದ ಹಡಪದ ಸಿದ್ದಮ್ಮ ತಂದೆ ಕೆ.ಗೂಳೆಪ್ಪ ಇವರಿಂದ ದಿನಾಂಕ 07-08-2015 ರ ಡಾಕ್ಯುಮೆಂಟ್ ನಂಬರ್: 1439/2015-16 ರ ಪ್ರಕಾರ ರೂ: 3.08.000/- ಗಳಿಗೆ ಖಂಡಿತ ಕ್ರಯಕ್ಕೆ ಖರೀದಿಸಿ ಕೂಡ್ಲಿಗಿಯ ಉಪನೊಂದಣಾಧಿಕಾರಿಗಳ ಕಛೇರಿಯಲ್ಲಿ ನೊಂದಣಿ ಮಾಡಿಸಿ ಕೊಂಡಿರುತ್ತೇನೆ. ಸದರಿ ಕ್ರಯ ಪತ್ರ ಪ್ರಕಾರ ನನ್ನ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಬೇಕೆಂದು ಕೋರಿರುತ್ತಾರೆ.

ವಿಚಾರಣೆಯಲ್ಲಿ ತಕರಾರುದಾರರು ಗೈರು ಹಾಜರಾಗಿರುತ್ತಾರೆ. ಅವರು ಸದರಿ ವಿವಾದಿತ ಜಮೀನು ನನಗೆ ತಿಳಿಸದೇ ನನ್ನ ದೊಡ್ಡಮ್ಮಳಾದ ಸಿದ್ದಮ್ಮ ತಂದೆ ಕೆ.ಗೂಳೆಪ್ಪ ಇವರು ಮಾರಾಟ ಮಾಡಿದ್ದು ಸದರಿ ಜಮೀನು ನನ್ನ ಅಜ್ಜನಾದ ಗೂಳೆಪ್ಪ ಇವರಿಗೆ ಸೇರಿರುವುದರಿಂದ ತಕರಾರು ಅರ್ಜಿ ಮಾತ್ರ ಸಲ್ಲಿಸಿದ್ದು ವಿಚಾರಣೆಗೆ ಗೈರು ಹಾಜರಾಗಿರುತ್ತಾರೆ.

ಪು.ತಿ.ನೋ-2

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರ ಹೇಳಿಕೆಗಳನ್ನು ಕೇಳಿ ತಕರಾರುದಾರರು ವಿಚಾರಣೆಗೆ ಹಾಜರಾಗಿ ತಮ್ಮ ತಕರಾರು ಬಗ್ಗೆ ಯಾವುದೇ ಹೇಳಿಕೆಗಳನ್ನಾಗಲಿ ದಾಖಲೆಗಳನ್ನಾಗಲಿ ಸಲ್ಲಿಸಿರುವುದಿಲ್ಲ ಅವರು ಈ ಬಗ್ಗೆ ಆಸಕ್ತಿ ಇಲ್ಲವೆಂದು ಪರಿಗಣಿಸಿ ಅವರ ತಕರಾರು ಅರ್ಜಿಯನ್ನು ತಳ್ಳಿಹಾಕಿ ಕರ್ನಾಟಕ ಭೂಕಂದಾಯ ಕಾಯ್ದೇ 1964 ರ ಕಲಂ 128 ರ ಅಡಿಯಲ್ಲಿ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

## -:ಆದೇಶ:-

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಉಜ್ಜನಿ ಗ್ರಾಮದ ಸನಂ 768ಬಿ. ವಿಸ್ತೀರ್ಣ 2-78. ಎಕ್ರೆ ಜಮೀನನ್ನು ದಿನಾಂಕ 07-08-2015 ರ ಡಾಕ್ಯುಮೆಂಟ್ ನಂಬರ್: 1439/2015-16. ರ ಕ್ರಯ ದಸ್ತಾವೇಜು ಪ್ರಕಾರ ಅರ್ಜಿದಾರರಾದ ಹಾಗೂ ಕ್ರಯದಾರರಾದ ಫಕ್ಕೀರಪ್ಪ ತಂದೆ ಲೇಟ್ ಮಡಿವಾಳರ ಭರಮಪ್ಪ ಉಜ್ಜನಿ ಗ್ರಾಮ ಇವರ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 26-09-2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಉಪತಹಶೀಲ್ದಾರರು
ನಾಡಕಛೇರಿ ಕೊಟ್ಟೂರು

ಉಪ ತಹಶೀಲ್ದಾರರು
ನಾಡ ಕಾರ್ಯಾಲಯ
ಕೊಟ್ಟೂರು

ಇದರ ಪ್ರತಿಯನ್ನು:

1) ಅರ್ಜಿದಾರರಾದ ಫಕ್ಕೀರಪ್ಪ ತಂದೆ ಲೇಟ್ ಮಡಿವಾಳರ ಭರಮಪ್ಪ. ಹಡಪದ ಸಿದ್ದಮ್ಮ ತಂದೆ ಕೆ.ಗೂಳೆಪ್ಪ ಉಜ್ಜನಿ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ತಕರಾರುದಾರರಾದ ದ್ಯಾಮಪ್ಪ ತಂದೆ ಕಲ್ಲಪ್ಪ ಉಜ್ಜನಿ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.